# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** ದಿನಾಂಕ: 15.07.2019

## ಒಂದು ತಿಂಗಳ ಇ-ತ್ಯಾಜ್ಯ ಸಂಗ್ರಹಣಾ ಅಭಿಯಾನಕ್ಕೆ ಪೂಜ್ಯ ಮಹಾಪೌರರು ಅವರಿಂದ ಚಾಲನೆ:

ಬಿಬಿಎಂಪಿ ಮತ್ತು ಬಿ-ರೆಸ್ಪಾನ್ಸಿಬಲ್ ಸ್ವಯಂ ಸೇವಾ ಸಂಸ್ಥೆ ಸಹಯೋಗದಲ್ಲಿ ಇ-ತ್ಯಾಜ್ಯ(ನಿರುಪಯುಕ್ತ ಎಲೆಕ್ಟ್ರಾನಿಕ್ ಉಪಕರಣಗಳು)ವನ್ನು ಜುಲೈ 15 ರಿಂದ ಆಗಸ್ಟ್ 15 ರವೆಗೆ ಸಂಗ್ರಹಿಸುವ ಅಭಿಯಾನಕ್ಕೆ ಮಹಾಪೌರರು ಚಾಲನೆ ನೀಡಿದರು. ಈ ವೇಳೆ ಮಾನ್ಯ ಉಪಮಹಾಪೌರರು, ಮಾನ್ಯ ಆಡಳಿತ ಪಕ್ಷದ ನಾಯಕರು, ವಿಶೇಷ ಆಯುಕ್ತರು(ಆಡಳಿತ ಮತ್ತು ಘನತ್ಯಾಜ್ಯ), ಬಿ-ರೆಸ್ಪಾನ್ಸಿಬಲ್ ಸ್ವಯಂ ಸೇವಾ ಸಂಸ್ಥೆ ಸಂಸ್ಥಾಪಕರು ಹಾಗೂ ಪದಾಧಿಕಾರಿಗಳು, ಇತರೆ ಗಣ್ಯರುಗಳು ಇದ್ದರು.

ನಗರದಲ್ಲಿ ಉತ್ಪತ್ತಿ ಆಗುವ ಇ-ತ್ಯಾಜ್ಯಯವನ್ನು ಸಮರ್ಪಕವಾಗಿ ವಿಲೇವಾರಿ ಮಾಡುವ ಉದ್ದೇಶದಿಂದ ಬಿಬಿಎಂಪಿ ಮತ್ತು ಬಿ-ರೆಸ್ಪಾನ್ಸಿಬಲ್ ಸ್ವಯಂ ಸೇವಾ ಸಂಸ್ಥೆ ಸಹಯೋಗದಲ್ಲಿ ನಿರುಪಯುಕ್ತ ಎಲೆಕ್ಟ್ರಾನಿಕ್ ಉಪಕರಣಗಳ ಸಂಗ್ರಹಣಾ ಅಭಿಯಾನ ಪ್ರಾರಂಭಿಸಲಾಗಿದೆ ಎಂದು ಮಹಾಪೌರರು ತಿಳಿಸಿದರು.

ಇ-ತ್ಯಾಜ್ಯ ಸಂಗ್ರಹಣಾ ಅಭಿಯಾನಕ್ಕೆ ಚಾಲನೆ ನೀಡಿದ ಬಳಿಕ ಮಾತನಾಡಿದ ಮಹಾಪೌರರು, ನಗರದ ಸಾರ್ವಜನಿಕರಲ್ಲಿ ಇ-ತ್ಯಾಜ್ಯ ಎಲ್ಲಿ ಬಿಸಾಡಬೇಕೆಂಬ ಗೊಂದಲಗಳಿದ್ದವು. ಇದೀಗ ಬಿಬಿಎಂಪಿ ಮತ್ತು ಸ್ವಯಂ ಸೇವಾ ಸಂಸ್ಥೆ ಸಹಯೋಗದಲ್ಲಿ ನಿರುಪಯುಕ್ತ ಎಲೆಕ್ಟ್ರಾನಿಕ್ ಉಪಕರಣಗಳಾದ ಮೊಬೈಲ್, ಟಿವಿ, ವಾಷಿಂಗ್ ಮಿಷನ್, ಕಂಪ್ಯೂಟರ್, ಫ್ರಿಡ್ಜ್, ಟೆಲಿಪೋನ್, ಐರನ್ ಬಾಕ್ಸ್ ಸೇರಿದಂತೆ ಇನ್ನಿತರ ಉಪಕರಣಗಳನ್ನು ವೈಜ್ಞಾನಿಕವಾಗಿ ವಿಲೇವಾರಿ ಮಾಡಲು ಕ್ರಮ ವಹಿಸಲಾಗುತ್ತಿದೆ ಎಂದು ತಿಳಿಸಿದರು.

ಬಳಕೆಯಾಗದ ಇ-ತ್ಯಾಜ್ಯವನ್ನು ಮನೆಗಳಲ್ಲಿ, ಕಚೇರಿಗಳಲ್ಲಿ ಇಟ್ಟುಕೊಳ್ಳುವ ಬದಲು ಸ್ವಯಂ ಸೇವಾ ಸಂಸ್ಥೆಗೆ ನೀಡಿ. ಅದನ್ನು ಪಾಲಿಕೆಯಿಂದ ವೈಜ್ಞಾನಿವಾಗಿ ಸಂಸ್ಕರಿಸುತ್ತೇವೆ. ಅದಕ್ಕಾಗಿಯೇ ಜು.15 ರಿಂದ ಆಗಸ್ಟ್ 15ರವರೆಗೆ ಒಂದು ತಿಂಗಳ ಇ-ತ್ಯಾಜ್ಯ ಸಂಗ್ರಹಣಾ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಾರಂಭದಲ್ಲಿ ಪಾಲಿಕೆ ಕೇಂದ್ರ ಕಚೇರಿ ಮತ್ತು ಎಲ್ಲ ಎಂಟು ವಲಯಗಳ ಕಚೇರಿ ಆವರಣದಲ್ಲಿ ಇ-ತ್ಯಾಜ್ಯ ಬಿನ್ ಗಳನ್ನು ಅಳವಡಿಸಲಾಗಿದೆ. ಅಲ್ಲಿ ತಮ್ಮ ಮನೆಗಳಲ್ಲಿರುವ ನಿರುಪಯುಕ್ತ ಎಲೆಕ್ಟ್ರಾನಿಕ್ ಉಪಕರಣಗಳನ್ನು ತಂದು ಹಾಕಬಹುದು. ಬಳಿಕ ಹಂತ ಹಂತವಾಗಿ ಎಲ್ಲ 198 ವಾರ್ಡ್‌ಗಳಲ್ಲೂ ಇ-ತ್ಯಾಜ್ಯ ಸಂಗ್ರಹ ಬಿನ್‌ಗಳನ್ನು ಅಳವಡಿಸಲು ಕ್ರಮ ವಹಿಸಲಾಗುವುದು ಎಂದು ಹೇಳಿದರು.

ಇ-ತ್ಯಾಜ್ಯ ಸಂಗ್ರಹಣಾ ಅಭಿಯಾನದಲ್ಲಿ ಪಾಲಿಕೆ ಅಧಿಕಾರು ಹಾಗೂ ಸಿಬ್ಬಂದಿಗಳು ಕಾರ್ಯನಿರ್ವಹಿಸಲಿದ್ದಾರೆ. ಅವರ ಜೊತೆಗೆ ಸಾರ್ವಜನಿಕರು ಕೈ ಜೋಡಿಸಿದಲ್ಲಿ ಕಾರ್ಯಕ್ರಮ ಯಶಸ್ವಿಯಾಗಲಿದೆ. ಆದ್ದರಿಂದ ಎಲ್ಲ ಸಾರ್ವಜನಿಕರು ಕೈಜೋಡಿಸಿ ಅಭಿಯಾನವನ್ನು ಯಶಸ್ವಿಗೊಳಿಸಬೇಕು. ನಿಮ್ಮ ಮನೆಗಳಲ್ಲಿ ದೊಡ್ಡಗಾತ್ರದ ನಿರುಪಯುಕ್ತ ಯಂತ್ರಗಳಲಿದ್ದಲ್ಲಿ ದೂರವಾಣಿ ಸಂಖ್ಯೆಯಾದ 7349737586ಗೆ ಸಂಪರ್ಕಿಸಬಹುದು ಎಂದರು.

ಉಪಮಹಾಪೌರರು ಮಾತನಾಡಿ, ಬಿಬಿಎಂಪಿ ಹಾಗೂ ಬಿ-ರೆಸ್ಪಾನ್ಸಿಬಲ್ ಸ್ವಯಂ ಸೇವಾ ಸಂಸ್ಥೆ ಸಹಯೋಗದಲ್ಲಿ ಇ-ತ್ಯಾಜ್ಯ ಸಂಗ್ರಹಿಸುವ ಅಭಿಯಾನಕ್ಕೆ ಚಾಲನೆ ನೀಡಲಾಗಿದ್ದು, ಸಾರ್ವಜನಿಕರು ಈ ಅಭಿಯಾನದಲ್ಲಿ ಭಾಗಿಯಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದರು.

ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.

ಸಾರ್ವಜನಿಕ ಸಂಪರ್ಕಾಧಿಕಾರಿ


E-WASTE DROP BOX
bE-Responsible
www.be-responsible.in
7349737586
DROP HERE




E-WASTE
OLD
PHONE